# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೊಂಭತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ: 14ನೇ ಫೆಬ್ರವರಿ, 2023**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪಿ.ಆರ್. ರಮೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 10 (86) } ಮಾನ್ಯ ನಗರಾಭಿವೃದ್ಧಿ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

## 02. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

"2023ನೇ ಫೆಬ್ರವರಿ, 10ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾ ಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:13.02.2023ರಂದು **ಡಾ॥ ತೇಜಸ್ವಿನಿ ಗೌಡ** ರವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ:

**ಎರಡನೇ ದಿನ**

## 03. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆಯ ಶ್ರೀ ನರಸಿಂಹರಾಜ ಜಿಲ್ಲಾ ಆಸ್ಪತ್ರೆಯಲ್ಲಿ ಹಾಸಿಗೆಗಳ ಸಾಮರ್ಥ್ಯಕ್ಕೆ ತಕ್ಕಂತೆ ವೈದ್ಯರು, ಶುಶ್ರೂಷಾಧಿಕಾರಿಗಳು ಹಾಗೂ ಗ್ರೂಪ್ "ಡಿ" ಸಿಬ್ಬಂದಿಗಳನ್ನು ನೇಮಕ ಮಾಡದಿರುವುದರಿಂದ ಉದ್ಭವಿಸಿರುವ ಸಮಸ್ಯೆಯ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

..2..

೦೨. **ಶ್ರೀ ನಿರಾಣಿ ಹಣಮಂತ ರುದ್ರಪ್ಪ** ಅವರು ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ನಿರಾಶ್ರಿತರಿಗೆ ಪುನರ್ ವಸತಿ ಕಲ್ಪಿಸುವ ಕುರಿತು ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

೦೩. **ಶ್ರೀ ಕೆ. ಹರೀಶ್ ಕುಮಾರ್** ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಉಪ್ಪಿನ ಅಂಗಡಿ ಪೇಟೆಯ ಮಾರುಕಟ್ಟೆ ಸುತ್ತಮುತ್ತ ತೆರೆದ ಚರಂಡಿ ಬದಲಾಗಿ ಭೂಗತ ಚರಂಡಿಯನ್ನು ನಿರ್ಮಿಸಿ ತ್ಯಾಜ್ಯ ಸಂಸ್ಕರಣೆ ಮಾಡುವ ಕುರಿತು ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

೦೪. **ಎಸ್.ವ್ಹಿ. ಸಂಕನೂರ** ಅವರು ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರು/ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗೆ ವಯೋಮಿತಿ ಹೆಚ್ಚಿಸುವಲ್ಲಿ ಉಂಟಾಗಿರುವ ತಾರತಮ್ಯದ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

೦1. **ಶ್ರೀ ಮಂಜುನಾಥ ಭಂಡಾರಿ** ಅವರು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಸ್ಥಳೀಯ ಆಡಳಿತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಸರ್ಕಾರಿ ನೌಕರರೆಂದು ಪರಿಗಣಿಸುವ ಕುರಿತು ಪ್ರಸ್ತಾಪಿಸುವುದು.

೦೨. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ** ಅವರು ರಾಜ್ಯದಲ್ಲಿ ಎಲೆಚುಕ್ಕೆ ರೋಗದ ಉಲ್ಬಣ ಹಾಗೂ ಅಕಾಲಿಕ ಮಳೆಯ ಕಾರಣದಿಂದ ಫಸಲು ನಷ್ಟದ ಜೊತೆಗೆ ಗುಣಮಟ್ಟ ಕುಸಿತ, ಬೆಳೆ ನಷ್ಟ ಹಾಗೂ ಬೆಲೆ ಕುಸಿತ ಉಂಟಾಗಿರುವುದರಿಂದ, ಅಡಿಕೆ ಬೆಳೆಗಾರರು ಎದುರಿಸುತ್ತಿರುವ ದಾರುಣ ಪರಿಸ್ಥಿತಿಯ ಕುರಿತು ಪ್ರಸ್ತಾಪಿಸುವುದು.

೦೩. **ಶ್ರೀ ಪ್ರಕಾಶ್ ಕೆ. ರಾಥೋಡ್** ಅವರು ರಾಜ್ಯದಲ್ಲಿರುವ ಖಾಸಗಿ ಶಾಲೆಗಳಲ್ಲಿ ಕೇಂದ್ರ ಪಠ್ಯ ಕ್ರಮವನ್ನು ಭೋದಿಸಲು ಶಿಕ್ಷಣ ಇಲಾಖೆಯಿಂದ ಎನ್.ಓ.ಸಿ. ಪಡೆಯಲು ಸಾಧ್ಯವಾಗದೆ ಇರುವ ಶಾಲೆಗಳ ಆಡಳಿತ ಮಂಡಳಿಯವರು ಅಕ್ರಮವಾಗಿ ನಕಲಿ ಎನ್.ಓ.ಸಿ. ಪತ್ರಗಳನ್ನು ನೀಡುತ್ತಿರುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**